# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 117 (131) |
| ಸದಸ್ಯರ ಹೆಸರು | | ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 13.09.2021 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| (ಅ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಎಷ್ಟು ಜನ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. | ಪ್ರಸ್ತುತ 2020-21ನೇ ಸಾಲಿನಲ್ಲಿ ಒಟ್ಟು 14183 ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. |
| (ಆ) | ಇವರು ಎಷ್ಟು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ; (ವಿವರ ಒದಗಿಸುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003ರಲ್ಲಿ ಇನ್ನು ಮುಂದೆ ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಎಲ್ಲೆಲ್ಲಿ ಹೆಚ್ಚುವರಿ ಕಾರ್ಯಭಾರ ಕಂಡು ಬರುತ್ತದೆಯೋ ಅಲ್ಲಲ್ಲಿ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.<br><br>ಅದರಂತೆ, ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತಿ ಶೈಕ್ಷಣಿಕ ವರ್ಷದಲ್ಲಿ ಕೋರ್ಸ್/ ಕಾಂಬಿನೇಷನ್ ಮತ್ತು ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗನುಗುಣವಾಗಿ ಉದ್ಭವಿಸುವ ಬೋಧನಾ ಕಾರ್ಯಭಾರವನ್ನು ಮೊದಲು ಖಾಯಂ ಅಧ್ಯಾಪಕರಿಗೆ ಹಂಚಿಕೆ ಮಾಡಿ, ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಕಲಾ/ವಾಣಿಜ್ಯ ವಿಷಯಕ್ಕೆ ವಾರಕ್ಕೆ ಗರಿಷ್ಠ 08 ಗಂಟೆ ಹಾಗೂ ವಿಜ್ಞಾನ ವಿಷಯಗಳಿಗೆ ಗರಿಷ್ಠ 10 ಗಂಟೆಗಳಿಗೆ ಮಾತ್ರ ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತಗೊಳಿಸಿ, ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ತಾತ್ಕಾಲಿಕವಾಗಿ ಬಳಸಿಕೊಳ್ಳಲಾಗುತ್ತಿದೆ ಮತ್ತು ಆಯಾ ಶೈಕ್ಷಣಿಕ ವರ್ಷದ ಅಂತ್ಯದಲ್ಲಿ ಅತಿಥಿ ಉಪನ್ಯಾಸಕರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುತ್ತದೆ.<br><br>ಪ್ರಸ್ತುತ, 2020-21ನೇ ಸಾಲಿನಲ್ಲಿ ಒಟ್ಟು-14183 ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. |
| (ಇ) | ಇವರಿಗೆ ನೀಡುತ್ತಿರುವ ಗೌರವಧನ ಎಷ್ಟು; | ಸರ್ಕಾರದ ಆದೇಶ ಸಂಖ್ಯೆ: ಇಡಿ/66/ಡಿಸಿಇ/2017, ದಿನಾಂಕ:04.04.2017ರಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55ರಷ್ಟು ಅಂಕಗಳನ್ನು ಪಡೆದಿದ್ದು, ಎನ್‌ಇಟಿ/ಎಸ್‌ಎಲ್‌ಇಟಿ ಅಥವಾ ಪಿ.ಹೆಚ್‌ಡಿ ಪಡೆದುಕೊಂಡಿರುವ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಮಾರ್ಚ್-2017 ರಿಂದ ಜಾರಿಗೆ ಬರುವಂತೆ ರೂ.13,000/- (ಹದಿಮೂರು ಸಾವಿರ ರೂಪಾಯಿಗಳು |

| | | |
|---|---|---|
| | | ಮಾತ್ರ) ಹಾಗೂ ಸ್ನಾತಕೋತ್ತರ/ಎಂ.ಫಿಲ್ ಪದವೀಧರ ಅತಿಥಿ ಉಪನ್ಯಾಸಕರಿಗೆ ರೂ.11,000/- (ಹನ್ನೊಂದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಪಾವತಿಸಲಾಗುತ್ತಿದೆ. |
| (ಈ) | ಇವರಿಗೆ ಸೇವೆ ಖಾಯಂಗೊಳಿಸಿ, ಸೇವಾ ಭದ್ರತೆ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ/55/ಡಿಸಿಇ/2005, ದಿನಾಂಕ:25.08.2012 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ 1995-1996 ರಿಂದ 2002-03ರ ಶೈಕ್ಷಣಿಕ ವರ್ಷಗಳಲ್ಲಿ ಸತತವಾಗಿ ಎರಡು ವರ್ಷ ಅರೆಕಾಲಿಕ ಉಪನ್ಯಾಸಕರಾಗಿ ಕಾರ್ಯನಿರ್ವಹಿಸಿದವರ ಸೇವೆಯನ್ನು ಕಾಲೇಜು ಶಿಕ್ಷಣ ಇಲಾಖೆಯಲ್ಲಿ ವಿಲೀನಗೊಳಿಸದಿರುವ ಬಗ್ಗೆ ಸ್ಪಷ್ಟನೆ ನೀಡಲಾಗಿದ್ದು, ಅದರಂತೆ, ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ 1995-96 ರಿಂದ 2002-03ರ ಶೈಕ್ಷಣಿಕ ವರ್ಷಗಳಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಕಾರ್ಯನಿರ್ವಹಿಸಿದ ವ್ಯಕ್ತಿಗಳ ಸೇವೆಯನ್ನು ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಸಕ್ರಮಾತಿಗೊಳಿಸಿದಲ್ಲಿ, ಅದು Perpetuate an illegality in the matter of public employment ಆಗುವುದರಿಂದ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ವ್ಯಕ್ತಪಡಿಸಿರುವ ನಿಲುವಿನ ವಿರುದ್ಧವಾಗಿರುತ್ತದೆ. ಆದುದರಿಂದ 1995-96 ರಿಂದ 2002-03ರ ಶೈಕ್ಷಣಿಕ ವರ್ಷಗಳಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಕಾರ್ಯನಿರ್ವಹಿಸಿದ ವ್ಯಕ್ತಿಗಳು ತಮ್ಮ ಸೇವೆಯನ್ನು ಸಕ್ರಮಾತಿಗೊಳಿಸುವಂತೆ ಕೋರಿಕೆ ಸಲ್ಲಿಸಿದ್ದಲ್ಲಿ, ಅವುಗಳನ್ನು ಮೇಲೆ ತಿಳಿಸಿರುವ ಕಾರಣಗಳನ್ನು ಉಲ್ಲೇಖಿಸಿ ತಿರಸ್ಕರಿಸಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ 1994-95 ರ ನಂತರ ಅರೆಕಾಲಿಕ ಉಪನ್ಯಾಸಕರಾಗಿ ನೇಮಕಗೊಂಡವರನ್ನು ಮತ್ತು 2004-05ರ ನಂತರ ಅತಿಥಿ ಉಪನ್ಯಾಸಕರಾಗಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವವರನ್ನು ಯಾವುದೇ ಕಾರಣಕ್ಕೂ ಸಕ್ರಮಗೊಳಿಸಲಾಗುವುದಿಲ್ಲ. ಅದು ಕಾನೂನು ವಿರುದ್ಧವಾದದ್ದು ಹಾಗೂ ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾದದ್ದು ಆದುದರಿಂದ, ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ/ಮುಂದೆ ಉದ್ಭವಿಸಬಹುದಾದ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕವೇ ತುಂಬಬೇಕಾಗುತ್ತದೆ ಎಂಬುದಾಗಿ ದಿನಾಂಕ: 25.08.2012 ರ ಸರ್ಕಾರದ ಸುತ್ತೋಲೆಯಲ್ಲಿ ಸ್ಪಷ್ಟವಾಗಿ ತಿಳಿಸಲಾಗಿರುತ್ತದೆ. |
| | | ಮುಂದುವರೆದು, ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದ ಶ್ರೀ ವೀರಣ್ಣ ಎಸ್. ಸಜ್ಜನರ್ ಹಾಗೂ ಇತರೆ 15 ಅತಿಥಿ ಉಪನ್ಯಾಸಕರುಗಳು ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿ ಸಂಖ್ಯೆ: 4625-4640/2012 ನ್ನು ದಾಖಲಿಸಿ, ತಮ್ಮ ಸೇವೆಯನ್ನು ಸಕ್ರಮಾತಿಗೊಳಿಸಿ, ಸರ್ಕಾರಿ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಯಲ್ಲಿ ನೇಮಕ |

| | | |
|---|---|---|
| | | ಮಾಡಲು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಪರಿಶೀಲಿಸಿದ ಮಾನ್ಯ ನ್ಯಾಯಮಂಡಳಿಯು ಮಾನ್ಯ ಸರ್ವೋಚ್ಛ ನ್ಯಾಯಾಲಯದ ಸಂವಿಧಾನ ಪೀಠವು ಉಮಾದೇವಿ ಪ್ರಕರಣದಲ್ಲಿ ತಾತ್ಕಾಲಿಕ ನೌಕರರನ್ನು ಅವರ ಸೇವಾವಧಿಯನ್ನು ಆಧರಿಸಿ ಸೇವಾ ಸಕ್ರಮಾತಿಗೆ ಪರಿಗಣಿಸಲು ಅರ್ಹರಾಗಿರುವುದಿಲ್ಲವೆಂದು, ಅದೇ ರೀತಿ ನೇಮಕಾತಿ ನಿಯಮಗಳಂತೆ ನೇಮಕಾತಿ ಆಗದಿರುವ ವ್ಯಕ್ತಿಗಳಿಗೆ ಸಕ್ರಮಾತಿಯ ಹಕ್ಕು ದೊರೆಯುವುದಿಲ್ಲವೆಂದು ಹಾಗೂ ಇಂತಹ ನಿಯಮಬಾಹಿರ ನೇಮಕಾತಿಯನ್ನು ಸಕ್ರಮಾತಿಗೊಳಿಸಬಾರದೆಂದು ತಿಳಿಸಿರುವ ನಿಲುವನ್ನು ಆಧರಿಸಿ ಸದರಿ ಅರ್ಜಿಯನ್ನು ದಿನಾಂಕ:28.03.2013 ರಂದು ವಜಾಗೊಳಿಸಿದೆ.<br><br>ಅಲ್ಲದೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಸಕ್ರಮಾತಿಗೊಳಿಸುವಂತೆ ಮಾನ್ಯ ಕರ್ನಾಟಕಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ:2526-2532/2014, (ಶ್ರೀ ಕೆ.ಆರ್.ವಿಶ್ವಕುಮಾರ್ & ಇತರರು), ಅರ್ಜಿ ಸಂಖ್ಯೆ:1579-1585/2017 (ಶ್ರೀ ಜಯಚಂದ್ರ ಕೆ.ಇ. & ಇತರರು) ಮತ್ತು ಇತ್ತೀಚಿಗೆ ಅರ್ಜಿ ಸಂಖ್ಯೆ:823-839/2020 (ಶ್ರೀ ಸಕಲೇಶ್ ಹೆಚ್.ಜಿ & ಇತರರು) ಕ್ಕೆ ದಿನಾಂಕ:14.07.2021 ರಂದು ನೀಡಿದ ತೀರ್ಪಿನಲ್ಲಿ ಸಕ್ರಮಾತಿಯು ನೇಮಕಾತಿಯ ವಿಧಾನವಾಗಿಲ್ಲದ ಕಾರಣ ಅದನ್ನು ಒಪ್ಪಿದ್ದಲ್ಲಿ ನಿಯಮಬಾಹಿರವಾಗಿ ಹೊಸ ವಿಧಾನವನ್ನು ಸೃಷ್ಟಿಸಿದಂತಾಗುತ್ತದೆ ಎಂಬ ನಿಲುವುವನ್ನು ಉಮಾದೇವಿ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ವ್ಯಕ್ತ ಪಡಿಸಿರುವುದರಿಂದ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ನೇರ ನೇಮಕಾತಿ ಮೂಲಕ ನಿಯಮಾನುಸಾರ ಆಯ್ಕೆಗೊಳ್ಳದ ಅತಿಥಿ ಉಪನ್ಯಾಸಕರ ಸೇವೆಯನ್ನು ಖಾಯಂ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

ಇಡಿ 152 ಡಿಸಿಇ 2021

(ಡಾ.ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ ಸಚಿವರು